೯. ಪ್ರಕಟಣೆ

ಅಧ್ಯಕ್ಷರು: ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿರುತ್ತದೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ ೧೧೮ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತು ದಿನಾಂಕ ೩ನೇ ಆಗಸ್ಟ್ ೨೦೦೧ರಂದು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿ ಇಲ್ಲದೆ ಅಂಗೀಕರಿಸಿದೆ.

೧. ತುಂಗಭದ್ರಾ ಸಕ್ಕರೆ (ದೇವಿ ಸಕ್ಕರೆ) ನಿಯಮಿತ (ಉದ್ಯಮದ ಆರ್ಜನೆ ಮತ್ತು ವರ್ಗಾವಣೆ) (ನಿರಸನ) ವಿಧೇಯಕ, ೨೦೦೧;

೨. ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಬಾಕಿಗಳ ವಸೂಲಿ) ಮತ್ತು ಇತರೆ ಕಾನೂನು (ತಿದ್ದುಪಡಿ) ವಿಧೇಯಕ, ೨೦೦೧;

೩. ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕ, ೨೦೦೧;

೪. ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ವಿಧೇಯಕ, ೨೦೦೧.